ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಶುಕ್ರವಾರ, ದಿನಾಂಕ : 29 ನೇ ಜನವರಿ, 2021

ಅಲ್ಪಸಂಖ್ಯಾತ ಜನರು ವಾಸಿಸುವ ಪ್ರದೇಶಗಳಲ್ಲಿ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಇರುವ ಯೋಜನೆಗಳ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

07 (19) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಅಲ್ಪಸಂಖ್ಯಾತ ಜನರು ವಾಸಿಸುವ ಪ್ರದೇಶಗಳಲ್ಲಿ ಯಾವ ಯಾವ ಯೋಜನೆಗಳನ್ನು ಅನುಷ್ಠಾನಗೊಳಿಸಬಹುದು ಮತ್ತು ಯೋಜನೆಗಳ ಅನುಷ್ಠಾನಕ್ಕೆ ಇರುವ ಮಾನದಂಡಗಳೇನು; ಈ ಯೋಜನೆಗಳಲ್ಲಿ ಯಾವ ಯಾವ ಕಾಮಗಾರಿಗಳನ್ನು ಮಾಡಬಹುದು; (ಸದರಿ ಯೋಜನೆಗಳಲ್ಲಿ ಕಾಮಗಾರಿಗಳನ್ನು ಅನುಷ್ಠಾನ ಮಾಡಲು ಇರುವ ಸರ್ಕಾರಿ ಸುತ್ತೋಲೆ/ಆದೇಶಗಳ ಪ್ರತಿಗಳನ್ನು ನೀಡುವುದು)

(ಆ) ಮಂಡ್ಯ ಜಿಲ್ಲಾ ವ್ಯಾಪ್ತಿಯಲ್ಲಿ ಅಲ್ಪಸಂಖ್ಯಾತ ಜನರು ವಾಸಿಸುವ ಪ್ರದೇಶಗಳಲ್ಲಿ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಯಾವ ಯೋಜನೆಗಳನ್ನು ರೂಪಿಸಲಾಗಿದೆ; (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಇ) ಅಲ್ಪಸಂಖ್ಯಾತರ ಇಲಾಖೆಯಿಂದ ಮಂಡ್ಯ ಜಿಲ್ಲಾ ವ್ಯಾಪ್ತಿಯಲ್ಲಿ ಕಳೆದ ಮೂರು ವರ್ಷಗಳಿಂದ ಅಲ್ಪಸಂಖ್ಯಾತ ಜನರು ವಾಸಿಸುವ ಪ್ರದೇಶದಲ್ಲಿ ಯಾವ ಯಾವ ಕಾಮಗಾರಿ ಕೈಗೊಳ್ಳಲಾಗಿದೆ? (ಸಂಪೂರ್ಣ ವಿವರ ನೀಡುವುದು)